**All India Radio: Bangalore**
**National Bulletin In Kannada**
**25.01.2026 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಕೇಂದ್ರ ಸರ್ಕಾರದ ಸುಧಾರಣಾ ಕ್ರಮಗಳ ಫಲವಾಗಿ ಜಾಗತಿಕ ಅನಿಶ್ಚಿತತೆಗಳ ನಡುವೆಯೂ ಭಾರತದ ನಿರಂತರ ಆರ್ಥಿಕ ಪ್ರಗತಿ - ರಾಷ್ಟ್ರಪತಿ ದ್ರೌಪದಿ ಮುರ್ಮು

೨. ದೇಶದ ೧೩೧ ಜನರು ಪದ್ಮ ಪ್ರಶಸ್ತಿಗೆ ಭಾಜನ; ಐವರಿಗೆ ಪದ್ಮವಿಭೂಷಣ, ೧೩ ಜನರಿಗೆ ಪದ್ಮಭೂಷಣ ಮತ್ತು ೧೧೩ ಮಂದಿಗೆ ಪದ್ಮಶ್ರೀ ಪುರಸ್ಕಾರ

೩. ಕರ್ನಾಟಕದ ಶತಾವಧಾನಿ ಆರ್.ಗಣೇಶ್ ಅವರಿಗೆ ಪದ್ಮಭೂಷಣ, ಟಿ.ಟಿ.ಜಗನ್ನಾಥ್ ಅವರಿಗೆ ಮರಣೋತ್ತರ ಸೇರಿ ಆರು ಮಂದಿಗೆ ಪದ್ಮಶ್ರೀ ಪ್ರಶಸ್ತಿ

೪. ಭಾರತ-ನ್ಯೂಜಿಲೆಂಡ್ ಟಿ-೨೦ ಕ್ರಿಕೆಟ್; ಭಾರತಕ್ಕೆ ೧೫೪ ರನ್‌ಗಳ ಗುರಿ ನೀಡಿರುವ ನ್ಯೂಜಿಲೆಂಡ್

*****************

ದೇಶದ ಆರ್ಥಿಕ ಭವಿಷ್ಯವನ್ನು ರೂಪಿಸುವ ಪಯಣದಲ್ಲಿ ಸ್ವಾವಲಂಬನೆ ಮತ್ತು ಸ್ವದೇಶಿ ಮಾರ್ಗದರ್ಶಿ ತತ್ವಗಳಾಗಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದ್ದಾರೆ.

೭೭ ನೇ ಗಣರಾಜ್ಯೋತ್ಸವದ ಮುನ್ನಾದಿನವಾದ ಇಂದು ರಾಷ್ಟ್ರವನ್ನುದ್ದೇಶಿಸಿ ಮಾಡಿದ ಭಾಷಣದಲ್ಲಿ, ಭಾರತದ ಯುವ ಉದ್ಯಮಿಗಳು, ಕ್ರೀಡಾಪಟುಗಳು, ವಿಜ್ಞಾನಿಗಳು ಮತ್ತು ವೃತ್ತಿಪರರು ದೇಶಕ್ಕೆ ಚೈತನ್ಯ ತುಂಬುತ್ತಾ ಜಾಗತಿಕವಾಗಿ ತಮ್ಮ ಛಾಪು ಮೂಡಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಜಾಗತಿಕ ಅನಿಶ್ಚಿತತೆಗಳ ಹೊರತಾಗಿಯೂ, ದೇಶ ನಿರಂತರ ಆರ್ಥಿಕ ಬೆಳವಣಿಗೆಯನ್ನು ದಾಖಲಿಸುತ್ತಿದೆ ಎಂದು ಹೇಳಿದ ಅವರು, ಮುಂದಿನ ದಿನಗಳಲ್ಲಿ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗುವ ಗುರಿಯನ್ನು ಸಾಧಿಸುವತ್ತ ದೇಶ ಸಾಗುತ್ತಿದೆ ಎಂದರು.

ಜಿಎಸ್‌ಟಿ ಸುಧಾರಣೆ, ಕಾರ್ಮಿಕ ಸುಧಾರಣೆಗಳು ಉದ್ಯಮಗಳ ಅಭಿವೃದ್ಧಿಗೆ ವೇಗ ನೀಡಿವೆ. ‘ರಾಷ್ಟ್ರ ಮೊದಲು’ ಎಂಬ ಮನೋಭಾವದೊಂದಿಗೆ ಎಲ್ಲರೂ ಒಟ್ಟಾಗಿ ಕೆಲಸ ಮಾಡಬೇಕು ಎಂದು ಕರೆ ನೀಡಿದರು.

ಸಂವಿಧಾನದಲ್ಲಿ ಪ್ರತಿಪಾದಿಸಲಾದ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ಆದರ್ಶಗಳು ದೇಶದ ಗಣರಾಜ್ಯವನ್ನು ವ್ಯಾಖ್ಯಾನಿಸುತ್ತವೆ ಎಂದು ಅವರು ವಿವರಿಸಿದರು. ದೇಶದಲ್ಲಿ ಸ್ಟಾರ್ಟ್-ಅಪ್‌ಗಳ ಯಶಸ್ಸು ಭಾರತದ ಯುವ ಉದ್ಯಮಿಗಳ ಮೇಲೆ ಅವಲಂಬಿತವಾಗಿದೆ. ಯುವ ಪೀಳಿಗೆಯ ಆಕಾಂಕ್ಷೆಗಳ ಮೇಲೆ ಕೇಂದ್ರೀಕರಿಸಿದ ನೀತಿಗಳು ಮತ್ತು ಕಾರ್ಯಕ್ರಮಗಳ ಮೂಲಕ ದೇಶದ ಅಭಿವೃದ್ಧಿ ವೇಗವನ್ನು ಪಡೆಯುತ್ತದೆ ಎಂದು ಅವರು ತಿಳಿಸಿದರು.

೨೦೪೭ ರ ವೇಳೆಗೆ ವಿಕ್ಷಿತ್ ಭಾರತ ನಿರ್ಮಾಣದಲ್ಲಿ ಯುವಜನರ ಶಕ್ತಿಯು ಪ್ರಮುಖ ಪಾತ್ರ ವಹಿಸುತ್ತದೆ ಎಂದು ರಾಷ್ಟ್ರಪತಿ ವಿಶ್ವಾಸ ವ್ಯಕ್ತಪಡಿಸಿದರು. ದೇಶದ ಮಹಿಳೆಯರು ರಾಷ್ಟ್ರದ ಒಟ್ಟಾರೆ ಅಭಿವೃದ್ಧಿಗೆ ಸಕ್ರಿಯವಾಗಿ ಕೊಡುಗೆ ನೀಡಿದ್ದು, ಸ್ವಸಹಾಯ ಗುಂಪುಗಳೊಂದಿಗೆ ಕಾರ್ಯನಿರ್ವಹಿಸುವ ಹತ್ತು ಕೋಟಿಗೂ ಹೆಚ್ಚು ಮಹಿಳೆಯರು ಅಭಿವೃದ್ಧಿ ಪ್ರಕ್ರಿಯೆಯನ್ನು ಮರು ವ್ಯಾಖ್ಯಾನಿಸುತ್ತಿದ್ದಾರೆ ಎಂದು ಅವರು ಒತ್ತಿ ಹೇಳಿದರು.

ಕೃಷಿಯಿಂದ ಬಾಹ್ಯಾಕಾಶದವರೆಗೆ, ಸ್ವ-ಉದ್ಯೋಗದಿಂದ ಸಶಸ್ತ್ರ ಪಡೆಗಳವರೆಗೆ ಪ್ರತಿಯೊಂದು ಕ್ಷೇತ್ರದಲ್ಲೂ ಮಹಿಳೆಯರು ತಮ್ಮ ಛಾಪು ಮೂಡಿಸುತ್ತಿದ್ದು, ಕ್ರೀಡಾ ಕ್ಷೇತ್ರದಲ್ಲಿ, ದೇಶದ ಹೆಣ್ಣುಮಕ್ಕಳು ಜಾಗತಿಕವಾಗಿ ಹೊಸ ಮಾನದಂಡಗಳನ್ನು ಸ್ಥಾಪಿಸಿದ್ದಾರೆ ಎಂದು ತಿಳಿಸಿದರು.

ಕಳೆದ ವರ್ಷ ನವೆಂಬರ್‌ನಲ್ಲಿ ಐಸಿಸಿ ಮಹಿಳಾ ಕ್ರಿಕೆಟ್ ವಿಶ್ವಕಪ್ ಮತ್ತು ಅಂಧ ಮಹಿಳೆಯರ ಟಿ ೨೦ ವಿಶ್ವಕಪ್ ಗೆಲ್ಲುವ ಮೂಲಕ, ಭಾರತದ ಹೆಣ್ಣುಮಕ್ಕಳು ಕ್ರೀಡಾ ಇತಿಹಾಸದಲ್ಲಿ ಸುವರ್ಣ ಅಧ್ಯಾಯವನ್ನು ಬರೆದಿದ್ದಾರೆ ಎಂದು ಅವರು ಹೇಳಿದರು.

ಅನ್ನದಾತ ರೈತರು ದೇಶದ ಸಮಾಜ ಮತ್ತು ಆರ್ಥಿಕತೆಯ ಬೆನ್ನೆಲುಬು ಎಂದು ಹೇಳಿದ ಮುರ್ಮು ಅವರು, ರೈತ ಮಕ್ಕಳು ದೇಶವನ್ನು ಆಹಾರ ಧಾನ್ಯಗಳಲ್ಲಿ ಸ್ವಾವಲಂಬಿಯನ್ನಾಗಿ ಮಾಡಿದ್ದಾರೆ.

ಅಂತ್ಯೋದಯದ ಮನೋಭಾವವನ್ನು ಸಾಕಾರಗೊಳಿಸುವ 'ಪ್ರಧಾನಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆ' ೧೪೦ ಕೋಟಿಗೂ ಹೆಚ್ಚು ಜನರಿರುವ ದೇಶದಲ್ಲಿ ಯಾರೂ ಹಸಿವಿನಿಂದ ಬಳಲಬಾರದು ಎಂಬ ಕಲ್ಪನೆಯನ್ನು ಆಧರಿಸಿದೆ ಎಂದು ಅವರು ಹೇಳಿದರು.

ಭೂಮಿ ತಾಯಿಯ ಅಮೂಲ್ಯ ಸಂಪನ್ಮೂಲಗಳು ಭವಿಷ್ಯದ ಪೀಳಿಗೆಗೆ ಲಭ್ಯವಾಗುವಂತೆ ನೋಡಿಕೊಳ್ಳಲು ನಾಗರಿಕರು ಪ್ರಯತ್ನಿಸಬೇಕು ಎಂದು ರಾಷ್ಟ್ರಪತಿ ಹೇಳಿದರು.

ಪ್ರಕೃತಿಯೊಂದಿಗೆ ಸಾಮರಸ್ಯದ ಜೀವನಶೈಲಿಯು ಭಾರತದ ಸಾಂಸ್ಕೃತಿಕ ಸಂಪ್ರದಾಯದ ಭಾಗವಾಗಿದೆ ಎಂದು ಉಲ್ಲೇಖಿಸಿದ ಅವರು, ಈ ಜೀವನಶೈಲಿಯು ಜಾಗತಿಕ ಸಮುದಾಯಕ್ಕೆ ದೇಶದ ಸಂದೇಶದ ಆಧಾರವಾಗಿದೆ: ಪ್ರಪಂಚದ ಅನೇಕ ಭಾಗಗಳಲ್ಲಿ ಸಂಘರ್ಷಯುತ ವಾತಾವರಣವಿದ್ದು, ಭಾರತವು ಶಾಂತಿ-ಸಾಮರಸ್ಯದ ಸಂದೇಶ ಹರಡುತ್ತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಿಳಿಸಿದ್ದಾರೆ.

*****************

ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ಪದ್ಮ ಪುರಸ್ಕಾರಗಳನ್ನು ಇಂದು ಪ್ರಕಟಿಸಲಾಗಿದೆ.

೨೦೨೬ನೇ ಸಾಲಿನ ಪದ್ಮ ಪ್ರಶಸ್ತಿಗೆ ೧೩೧ ಜನರು ಭಾಜನರಾಗಿದ್ದಾರೆ. ಐವರಿಗೆ ಪದ್ಮವಿಭೂಷಣ, ೧೩ ಜನರಿಗೆ ಪದ್ಮಭೂಷಣ ಮತ್ತು ೧೧೩ ಮಂದಿಗೆ ಪದ್ಮಶ್ರೀ ಪ್ರಶಸ್ತಿ ಒಲಿದಿದೆ. ಈ ಪೈಕಿ ೧೯ ಮಹಿಳೆಯರು ಮತ್ತು ಆರು ವಿದೇಶಿಯರು ಸೇರಿದ್ದಾರೆ. ೧೬ ಮಂದಿಗೆ ಮರಣೋತ್ತರವಾಗಿ ಪದ್ಮ ಪುರಸ್ಕಾರ ಘೋಷಿಸಲಾಗಿದೆ.

ಕರ್ನಾಟಕದ ಶತಾವಧಾನಿ ಆರ್.ಗಣೇಶ್ ಅವರು ಪದ್ಮಭೂಷಣ ಪ್ರಶಸ್ತಿಗೆ ಭಾಜನರಾಗಿದ್ದಾರೆ. ವ್ಯಾಪಾರ ಮತ್ತು ಕೈಗಾರಿಕಾ ಕ್ಷೇತ್ರದಲ್ಲಿ ರಾಜ್ಯದ ಟಿ.ಟಿ.ಜಗನ್ನಾಥ್ ಅವರಿಗೆ ಮರಣೋತ್ತರವಾಗಿ ಪದ್ಮಶ್ರೀ ಪ್ರಶಸ್ತಿ ಪ್ರಕಟಿಸಲಾಗಿದೆ.

ಸಾಮಾಜಿಕ ಕಾರ್ಯಕರ್ತರ ವಿಭಾಗದಲ್ಲಿ ಪುಸ್ತಕ ಸಂಗ್ರಹಕಾರರು ಮತ್ತು ಗ್ರಂಥಪಾಲಕರಾದ ಅಂಕೇಗೌಡ ಎಂ ಮತ್ತು ಸಮಾಜ ಸೇವಕರಾದ ಎಸ್.ಜಿ.ಸುಶೀಲಮ್ಮ ಪದ್ಮಶ್ರೀ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ವೈದ್ಯಕೀಯ ಕ್ಷೇತ್ರದಲ್ಲಿ ಕುಸುಮರೋಗ ತಜ್ಞರಾದ ಸುರೇಶ್ ಹನಗವಾಡಿ, ವಿಜ್ಞಾನ ಮತ್ತು ಇಂಜಿನಿಯರಿಂಗ್ ವಿಭಾಗದಲ್ಲಿ ಶುಭಾ ವೆಂಕಟೇಶ್ ಅಯ್ಯಂಗಾರ್, ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಪ್ರಭಾಕರ್ ಕೋರೆ ಅವರಿಗೆ ಪದ್ಮಶ್ರೀ ಪುರಸ್ಕಾರ ಸಂದಿದೆ.

ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದವರನ್ನು ಗುರುತಿಸಿ ಪ್ರತಿ ವರ್ಷ ಗಣರಾಜ್ಯೋತ್ಸವದ ಸಂದರ್ಭದಲ್ಲಿ ಈ ಪ್ರಶಸ್ತಿಗಳನ್ನು ಪ್ರಕಟಿಸಲಾಗುವುದು. ಈ ಬಾರಿಯೂ ಕೂಡ ಕಲೆ, ಸಮಾಜ ಸೇವೆ, ವಿಜ್ಞಾನ, ವೈದ್ಯಕೀಯ, ಸಾಹಿತ್ಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅನುಪಮ ಕೊಡುಗೆ ನೀಡಿದವರಿಗೆ ಪ್ರಶಸ್ತಿ ಘೋಷಿಸಲಾಗಿದೆ.

*****************

ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಲೂಯಿಸ್ ಸ್ಯಾಂಟೋಸ್ ಡ ಕೋಸ್ಟಾ ಮತ್ತು ಯುರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಅವರನ್ನು ನವದೆಹಲಿಯಲ್ಲಿ ಇಂದು ಸ್ವಾಗತಿಸಲಾಯಿತು.

ಕರ್ತವ್ಯ ಪಥದಲ್ಲಿ ನಾಳೆ ನಡೆಯಲಿರುವ ೭೭ ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ಈ ಇಬ್ಬರು ನಾಯಕರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಆಹ್ವಾನದ ಮೇರೆಗೆ ಅವರು ಭಾರತಕ್ಕೆ ಭೇಟಿ ನೀಡಿದ್ದಾರೆ.

*****************

ಗಣರಾಜ್ಯೋತ್ಸವದ ಅಂಗವಾಗಿ ನಾಳೆ ನಡೆಯಲಿರುವ ಸ್ತಬ್ಧಚಿತ್ರ ಮೆರವಣಿಗೆಯಲ್ಲಿ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯದ "ಕೌಶಲ್ಯಗಳಿಂದ ಚಾಲಿತ: ಸ್ವಾವಲಂಬಿ, ಭವಿಷ್ಯ ಸಿದ್ಧ ಭಾರತವನ್ನು ನಿರ್ಮಿಸುವುದು" ಎಂಬ ವಿಷಯದ ಭವ್ಯ ಸ್ತಬ್ಧಚಿತ್ರ ಸಾಗಲಿದೆ.

ಈ ಸ್ತಬ್ಧಚಿತ್ರವು ಯುವ ಶಕ್ತಿಯಿಂದ ನಡೆಸಲ್ಪಡುವ ಮತ್ತು ನಾವಿನ್ಯತೆಯಿಂದ ಕೂಡಿದ ದೇಶವು ಸ್ವಾವಲಂಬಿ, ಭವಿಷ್ಯ ಸಿದ್ಧ ರಾಷ್ಟ್ರವಾಗಿ ರೂಪಾಂತರಗೊಳ್ಳುವುದರ ಪ್ರಬಲ ನಿರೂಪಣೆಯಾಗಿದೆ.

ಕೃತಕ ಬುದ್ಧಿಮತ್ತೆ, ನವೀಕರಿಸಬಹುದಾದ ಇಂಧನ, ಸುಧಾರಿತ ಉತ್ಪಾದನೆ, ವಿದ್ಯುತ್ ಚಲನಶೀಲತೆ ಮತ್ತು ಅರೆವಾಹಕಗಳಂತಹ ಭವಿಷ್ಯ-ಆಧಾರಿತ ಕ್ಷೇತ್ರಗಳು ಸ್ತಬ್ಧಚಿತ್ರದ ಕೇಂದ್ರಬಿಂದುವಾಗಿವೆ.

*****************

ಈ ವರ್ಷದ ಗಣರಾಜ್ಯೋತ್ಸವದ ಮೆರವಣಿಗೆಯಲ್ಲಿ ಭಾರತದ ನದಿಗಳು ಮತ್ತು ನದಿ ರಕ್ಷಕರಿಗೆ ಗೌರವ ಸಲ್ಲಿಸಲಾಗುವುದು ಎಂದು ಜಲಶಕ್ತಿ ಸಚಿವಾಲಯ ಇಂದು ತಿಳಿಸಿದೆ.

ಗಣರಾಜ್ಯೋತ್ಸವದ ಮೆರವಣಿಗೆ ಸಂದರ್ಭದಲ್ಲಿ ಸುತ್ತಲಿನ ಆವರಣಗಳಿಗೆ ದೇಶಾದ್ಯಂತ ಹರಿಯುವ ನದಿಗಳ ಹೆಸರನ್ನು ಇಡಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

ಒಟ್ಟು ೧೬೩ ವಿಶೇಷ ಜಲ ಯೋಧರ ಅತಿಥಿಗಳು ಗಣರಾಜ್ಯೋತ್ಸವದ ಮೆರವಣಿಗೆಯಲ್ಲಿ ವಿಶೇಷ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

****************

ಮತದಾನ ಎನ್ನುವುದು ಕೇವಲ ರಾಜಕೀಯ ಅಭಿವ್ಯಕ್ತಿಯಲ್ಲ, ಅದು ದೇಶದ ಚುನಾವಣಾ ಪ್ರಕ್ರಿಯೆಯಲ್ಲಿ ನಾಗರಿಕರ ನಂಬಿಕೆಯ ಪ್ರತಿಬಿಂಬವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ನಾಗರಿಕರು ತಮ್ಮ ಆಕಾಂಕ್ಷೆಗಳನ್ನು ವ್ಯಕ್ತಪಡಿಸುವ ಮಾಧ್ಯಮ ಕೂಡ ಮತದಾನ. ಇಂದಿನ ಮತದಾರರು ಭವಿಷ್ಯದ ಶಿಲ್ಪಿಗಳು, ಎಲ್ಲಾ ವಯಸ್ಕ ನಾಗರಿಕರು ತಮ್ಮ ಸಾಂವಿಧಾನಿಕ ಕರ್ತವ್ಯಗಳನ್ನು ಗಮನದಲ್ಲಿಟ್ಟುಕೊಂಡು ಮತದಾನದ ಹಕ್ಕನ್ನು ಚಲಾಯಿಸುವುದು ಮುಖ್ಯ ಎಂದು ರಾಷ್ಟ್ರಪತಿ ಒತ್ತಿ ಹೇಳಿದರು.

****************

ವಿಕಸಿತ ಭಾರತ ೨೦೪೭ ಗುರಿ ಸಾಧನೆಗೆ ಯುವ ಜನತೆ ಮುಂದಾಳತ್ವ ವಹಿಸುವಂತೆ ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವೀಯ ಕರೆ ನೀಡಿದ್ದಾರೆ.

ಕೇಂದ್ರಾಡಳಿತ ಪ್ರದೇಶ ಪುದುಚೆರಿಯ ಕಾರೈಕಲ್‌ನಲ್ಲಿ ವಿಕಸಿತ ಭಾರತ ಯುವ ನಾಯಕರ ಸಮಾವೇಶ ಉದ್ದೇಶಿಸಿ ಮಾತನಾಡಿದ ಅವರು, ಭಾರತದ ಶತಮಾನೋತ್ಸವದ ವೇಳೆಗೆ ದೇಶವನ್ನು ಅಭಿವೃದ್ಧಿಗೊಳಿಸುವಲ್ಲಿ ಯುವ ಜನತೆಯ ಪಾತ್ರ ನಿರ್ಣಾಯಕ ಎಂದರು.

ಪ್ರಧಾನಮಂತ್ರಿಗಳ ಮುನ್ನೋಟದ ಬಗ್ಗೆ ಪ್ರಸ್ತಾಪಿಸಿದ ಸಚಿವರು, ಕುಟುಂಬ ರಾಜಕಾರಣ ಮೀರಿ ಒಂದು ಲಕ್ಷ ಯುವ ಜನರನ್ನು ಪೋಷಿಸುವ ಬಗ್ಗೆ ತಿಳಿಸಿದರು.

ಇದಕ್ಕೂ ಮುನ್ನ ಸಚಿವರು ೯ ಕೋಟಿ ೫೦ ಲಕ್ಷ ರೂಪಾಯಿ ವೆಚ್ಚದ ಅಥ್ಲೆಟಿಕ್ ಟ್ರ್ಯಾಕ್‌ಗೆ ಶಂಕುಸ್ಥಾಪನೆ ನೆರವೇರಿಸಿದರು.

****************

ಗುವಾಹಟಿಯಲ್ಲಿ ಭಾರತ-ನ್ಯೂಜಿಲೆಂಡ್ ನಡುವೆ ನಡೆಯುತ್ತಿರುವ ಮೂರನೇ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ನ್ಯೂಜಿಲೆಂಡ್ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೫೩ ರನ್ ಗಳಿಸಿದೆ.

*********ಮುಕ್ತಾಯ********